ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೪

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**
**(ಮುಂದುವರೆದ ಉಪವೇಶನ)**
**ಶುಕ್ರವಾರ, ದಿನಾಂಕ: ೨೦ನೇ ಮಾರ್ಚ್, ೨೦೧೫**

---

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು
೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು
೩. ವಸತಿ ಸಚಿವರು
೪. ಅಬಕಾರಿ ಸಚಿವರು
೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು
೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು
೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

**ಬಸವ – ಇಂದಿರಾ ಆವಾಸ್ ಯೋಜನೆಯಡಿ ವಿತರಿಸಲಾದ ಮನೆಗಳು**

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೯೬ (೧೩೧೮) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪–೧೫ನೇ ಸಾಲಿನಲ್ಲಿ ಚಿತ್ರದುರ್ಗ ಜಿಲ್ಲೆ, ಚಳ್ಳಕೆರೆ ತಾಲ್ಲೂಕು ಮೊಳಕಾಲ್ಮೂರು ಕ್ಷೇತ್ರ ವ್ಯಾಪ್ತಿಯಲ್ಲಿ, ಬಸವಾ–ಇಂದಿರಾ ಆವಾಸ್ ಯೋಜನೆಯಡಿ ವಿತರಿಸಲಾದ ಮನೆಗಳ ಸಂಖ್ಯೆ ಎಷ್ಟು ;

(ಆ) ಸದರಿ ಹಂಚಿಕೆಯಾದ ಮನೆಗಳಲ್ಲಿ ಪೂರ್ಣಗೊಂಡಿರುವ ಮನೆಗಳ ಸಂಖ್ಯೆ ಎಷ್ಟು ;

(ಇ) ೨೦೧೫–೧೬ನೇ ಸಾಲಿಗೆ ಮೊಳಕಾಲ್ಮೂರು ಕ್ಷೇತ್ರಕ್ಕೆ ಹಂಚಿಕೆ ಮಾಡಲು ಉದ್ದೇಶಿಸಿರುವ ಮನೆಗಳ ಸಂಖ್ಯೆ ಎಷ್ಟು ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಾರ್ತಾ ಭವನ ನಿರ್ಮಾಣ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೯೭ (೨೦೨೪) ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಾರ್ತಾ ಭವನ ನಿರ್ಮಾಣ ಕಾಮಗಾರಿ ವಿಳಂಬಕ್ಕೆ ಕಾರಣಗಳೇನು;

(ಆ) ದಕ್ಷಿಣ ಕನ್ನಡ ಜಿಲ್ಲೆಯ ವಾರ್ತಾಧಿಕಾರಿಗೆ ವಾಹನವನ್ನು ಒದಗಿಸಲು ಪ್ರಸ್ತಾವನೆ ನೀಡಿದ್ದರೂ ಅನೇಕ ವರ್ಷಗಳಿಂದ ಈ ಪ್ರಸ್ತಾವನೆ ಪರಿಗಣಿಸದೇ ಇರಲು ಕಾರಣವೇನು;

(ಇ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಜಿಲ್ಲಾ ವಾರ್ತಾಧಿಕಾರಿಗೆ ವಾಹನ ಒದಗಿಸಲಾಗಿದೆ;

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಾರ್ತಾ ಇಲಾಖೆಗೆ ಸಂಬಂಧಪಟ್ಟ ನಾಮಫಲಕಗಳ ಸಂಖ್ಯೆ ಎಷ್ಟು;

(ಉ) ರಾಜ್ಯ ಸರ್ಕಾರದ ಯೋಜನೆಗಳ ಮಾಹಿತಿಯನ್ನು ಪ್ರಕಟಿಸುವ ಬಗ್ಗೆ ಇಲಾಖೆ ಕೈಗೊಂಡ ಕಾರ್ಯಕ್ರಮಗಳೇನು ? (ವಿವರ ನೀಡುವುದು)

## ೧೯೯೫–೯೬ ರಿಂದ ೨೦೧೪–೧೫ನೇ ಸಾಲಿನವರೆಗೆ ಪ್ರಾರಂಭವಾದ ಶಿಕ್ಷಣ ಸಂಸ್ಥೆಗಳಿಗೆ ಸಹಾಯಾನುದಾನವನ್ನು ವಿಸ್ತರಿಸುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೯೮ (೧೩೧೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೧೯೯೫–೯೬ ರಿಂದ ೨೦೧೪–೧೫ನೇ ಸಾಲಿನವರೆಗೆ ಬೆಳಗಾವಿ ವಿಭಾಗದಲ್ಲಿ ಪ್ರಾರಂಭವಾದ ಅನುದಾನ ರಹಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಸಂಸ್ಥೆಗಳ ಹೆಸರು ಮತ್ತು ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಹೆಸರು ಹಾಗೂ ಹುದ್ದೆಗಳ ತಾಲ್ಲೂಕುವಾರು ವಿವರ ನೀಡುವುದು;

(ಇ) ಈ ಅವಧಿಯಲ್ಲಿ ಪ್ರಾರಂಭವಾದ ಶಿಕ್ಷಣ ಸಂಸ್ಥೆಗಳನ್ನು ಸರ್ಕಾರ ಸಹಾಯಾನುದಾನಕ್ಕೊಳಪಡಿಸಲು ಚಿಂತನೆ ನಡೆಸಿದೆಯೇ;

(ಈ) ಈ ಸಂಸ್ಥೆಗಳನ್ನು ಸಹಾಯಾನುದಾನಕ್ಕೊಳಪಡಿಸಲು ಸರ್ಕಾರ ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳವುದು ?

## ವಸತಿ ಇಲಾಖೆಯಿಂದ ಗೃಹ ನಿರ್ಮಾಣಕ್ಕಾಗಿ ಭೂಸ್ವಾಧೀನ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೯೯ (೧೯೫೦) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೨ ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ವಸತಿ ಇಲಾಖೆಯಿಂದ ಎಷ್ಟು ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲಾಗಿದೆ;

(ಆ) ಕಳೆದ ೨ ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಗೃಹ ನಿರ್ಮಾಣ ಮಂಡಳಿಯಿಂದ ನಿವೇಶನಗಳು/ಮನೆಗಳು ಹಂಚಿಕೆಯಾಗಿರುವುದು ಎಷ್ಟು;

(ಇ) ಹಾಲಿ ಚಾಲ್ತಿಯಲ್ಲಿರುವ ವಸತಿ ಇಲಾಖೆಯ ಬಡಾವಣೆಗಳ ನಿರ್ಮಾಣ ಕಾರ್ಯ ಯಾವ ಹಂತದಲ್ಲಿದೆ?

## ಉತ್ತಮ ಗ್ರಾಮೀಣ ರಸ್ತೆಗಳು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೨೦೦ (೨೦೮೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದಾವಣಗೆರೆ ಜಿಲ್ಲೆಯ ಗ್ರಾಮೀಣ ಮತ್ತು ಪಂಚಾಯತ್ ರಾಜ್ ಇಲಾಖಾ ವತಿಯಿಂದ ೨೦೧೨–೧೩, ೨೦೧೩–೧೪ನೇ ಸಾಲಿನಲ್ಲಿ ಗ್ರಾಮೀಣ ರಸ್ತೆಗಳಿಗಾಗಿ ಮೀಸಲಿಟ್ಟ ಹಣವೆಷ್ಟು;

(ಆ) ದಾವಣಗೆರೆ ತಾಲ್ಲೂಕಿನಲ್ಲಿ ಸುಸ್ಥಿತಿಯಲ್ಲಿರುವ ಗ್ರಾಮೀಣ ರಸ್ತೆಗಳ ಉದ್ದವೆಷ್ಟು;

(ಇ) ದಾವಣಗೆರೆ ಜಿಲ್ಲೆಯಲ್ಲಿನ ಎಲ್ಲಾ ಗ್ರಾಮೀಣ ಅಭಿವೃದ್ಧಿ ರಸ್ತೆಗಳನ್ನು ಸುಸ್ಥಿತಿಗೆ ತರಲು ಬೇಕಾಗುವ ಹಣವೆಷ್ಟು ? (ದುಸ್ಥಿತಿಯಲ್ಲಿರುವ, ದಾವಣಗೆರೆ ಗ್ರಾಮೀಣ ರಸ್ತೆಗಳ ವಿವರಗಳನ್ನು ತಾಲ್ಲೂಕುವಾರು ನೀಡುವುದು)

## ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಟ್ಟಡಗಳಲ್ಲಿ ಶೌಚಾಲಯ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೧ (೨೦೭೮) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಇರುವ ಗ್ರಾಮ ಪಂಚಾಯಿತಿ ಕಟ್ಟಡಗಳಲ್ಲಿ ಶೌಚಾಲಯ ಹೊಂದಿರುವ ಗ್ರಾಮ ಪಂಚಾಯಿತಿಗಳು ಎಷ್ಟು;

(ಆ) ಶೌಚಾಲಯ ಇಲ್ಲದ ಕಟ್ಟಡಗಳು ಎಷ್ಟು; ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಈ ಎರಡು ಜಿಲ್ಲೆಗಳಲ್ಲಿ ಸ್ವಂತ ಕಟ್ಟಡಗಳನ್ನು ಹೊಂದಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು;

(ಈ) ಎಷ್ಟು ಗ್ರಾಮ ಪಂಚಾಯಿತಿಗಳು ಕಟ್ಟಡ ಹೊಂದಿಲ್ಲ, ಇದರ ಬಗ್ಗೆ ಸರ್ಕಾರದ ಕ್ರಮವೇನು ?

## ಮೈಸೂರು ನಗರದಲ್ಲಿ ವಸತಿರಹಿತ ಕುಟುಂಬಗಳನ್ನು ಗುರುತಿಸಿ ಸೌಲಭ್ಯ ಒದಗಿಸುವುದು

**ಶ್ರೀ ಸಿ.ಹೆಚ್. ವಿಜಯಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) –**

೨೦೨ (೧೩೨೩) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ನಗರ ವ್ಯಾಪ್ತಿಯಲ್ಲಿ ವಸತಿ ರಹಿತ ಕುಟುಂಬಗಳನ್ನು ಗುರುತಿಸಲು ಇಲಾಖೆಯಿಂದ ವ್ಯವಸ್ಥಿತವಾಗಿ ಸರ್ವೇಕ್ಷಣಾ ಕಾರ್ಯ ಕೈಗೆತ್ತಿಕೊಳ್ಳಲಾಗಿದೆಯೇ; ಈ ರೀತಿಯ ಸರ್ವೇಕ್ಷಣಾ ಕಾರ್ಯ ಈ ಹಿಂದೆ ಯಾವ ಇಸವಿಯಲ್ಲಿ ನಡೆಸಲಾಗಿತ್ತು; (ಮಾಹಿತಿ ಒದಗಿಸುವುದು)

(ಆ) ವಸತಿ ರಹಿತರಿಗೆ ವಸತಿ ಸೌಲಭ್ಯ ಒದಗಿಸಿಕೊಡಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಹಾಲಿ ಲಭ್ಯ ಇರುವ ವಸತಿ ಯೋಜನೆಗಳು ಯಾವುವು;

(ಇ) ಈ ಯೋಜನೆಗಳ ಅಡಿಯಲ್ಲಿ ಮೈಸೂರು ನಗರಕ್ಕೆ ಸಂಬಂಧಿಸಿದಂತೆ, ವಸತಿ ರಹಿತ ಕುಟುಂಬಗಳಿಗೆ ಕಳೆದ ಎರಡು ವರ್ಷಗಳಲ್ಲಿ ಹಂಚಿಕೆ ಮಾಡಲಾಗಿರುವ ಮನೆಗಳ ಸಂಖ್ಯೆ ಎಷ್ಟು; (ವಿವರಗಳನ್ನು ಒದಗಿಸುವುದು)

(ಈ) ಸರ್ವೇಕ್ಷಣಾ ಕಾರ್ಯದ ಅನ್ವಯ ಬಾಕಿ ಉಳಿದ ಇತರೆ ಕುಟುಂಬಗಳಿಗೆ ಈ ರೀತಿಯ ಸೌಲಭ್ಯ ಒದಗಿಸಿಕೊಡಲು ಇಲಾಖೆ ತೆಗೆದುಕೊಂಡಿರುವ ಕ್ರಮಗಳೇನು; ಬಾಕಿ ಉಳಿದಿರುವ ಕುಟುಂಬಗಳಿಗೆ ಇನ್ನೆಷ್ಟು ದಿನಗಳಲ್ಲಿ ಈ ಸೌಲಭ್ಯವನ್ನು ಒದಗಿಸಿಕೊಡಲಾಗುವುದು ? (ವಿವರಗಳನ್ನು ಒದಗಿಸುವುದು)

## ಕೆಮ್ಮಣ್ಣುಗುಂಡಿ ಅಭಿವೃದ್ಧಿ ಯೋಜನೆ

**ಶ್ರೀಮತಿ ಎ.ವಿ. ಗಾಯತ್ರಿ ಶಾಂತೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೩ (೨೦೭೫) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತರೀಕೆರೆ ತಾಲ್ಲೂಕಿನ ಕೆಮ್ಮಣ್ಣುಗುಂಡಿಯ ಶ್ರೀ ಕೃಷ್ಣರಾಜೇಂದ್ರ ಗಿರಿಧಾಮ ಅಭಿವೃದ್ಧಿ ಯೋಜನೆಯ ಅಂದಾಜು ಮೊತ್ತ ಎಷ್ಟು;

(ಆ) ಯೋಜನೆಗೆ ಇಲ್ಲಿಯವರೆಗೆ ಖರ್ಚಾಗಿರುವ ಮೊತ್ತ ಎಷ್ಟು;

(ಇ) ಕಾಮಗಾರಿ ಯಾವ ಹಂತದಲ್ಲಿದೆ; ಆಗಬೇಕಾಗಿರುವ ಕಾಮಗಾರಿಗೆ ಅನುದಾನದ ಕೊರತೆ ಇದೆಯೇ;

(ಈ) ಈ ಯೋಜನೆಯ ಕಾಮಗಾರಿ ಯಾವಾಗ ಪೂರ್ಣಗೊಳ್ಳುತ್ತದೆ ? (ಕಾಮಗಾರಿಯ ಪ್ರಗತಿಯ ಬಗ್ಗೆ ವಿವರಗಳನ್ನು ನೀಡುವುದು)

## "ಬಸವ ವಸತಿ ಯೋಜನೆ" ಅಡಿಯಲ್ಲಿ ಮನೆಗಳ ಮಂಜೂರಾತಿ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೪ (೨೦೬೪) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೫ ವರ್ಷಗಳಲ್ಲಿ ರಾಜ್ಯದಲ್ಲಿ ವಸತಿ ರಹಿತ ಬಡ ಜನರಿಗೆ ವಸತಿಯನ್ನು ಒದಗಿಸಲು "ಬಸವ ವಸತಿ ಯೋಜನೆ" ಅಡಿಯಲ್ಲಿ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ;

(ಆ) ಹಾಗಿದ್ದಲ್ಲಿ, ಮೈಸೂರು–ಚಾಮರಾಜನಗರ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಮನೆಗಳಿಗೆ ಮಂಜೂರಾತಿ ನೀಡಲಾಗಿದೆ; ಇವುಗಳಲ್ಲಿ ಪೂರ್ಣಗೊಂಡ ಹಾಗೂ ಪ್ರಗತಿಯಲ್ಲಿರುವ ಮನೆಗಳ ಸಂಖ್ಯೆ ಎಷ್ಟು;

(ಇ) ಈ ಜಿಲ್ಲೆಗಳಲ್ಲಿ ಪೂರ್ಣಗೊಂಡ ಮನೆಗಳಿಗೆ ಹಾಗೂ ಪ್ರಗತಿಯಲ್ಲಿರುವ ಮನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; ಬಾಕಿ ಉಳಿದಿರುವ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ?

**ಅರ್ಜಿಗಳನ್ನು ಆಹ್ವಾನಿಸದೇ ನಿವೇಶನ ಹಂಚಿಕೆ ಮಾಡುವ ಕುರಿತು**

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೫ (೧೯೫೬) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದಿನಾಂಕ : ೧೮–೦೨–೨೦೧೫ರ ಪ್ರಜಾವಾಣಿ ದಿನಪತ್ರಿಕೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅರ್ಜಿಗಳನ್ನು ಆಹ್ವಾನಿಸುವ ಮೊದಲೇ ಮನೆಗಳನ್ನು/ ನಿವೇಶನ ಹಂಚಿಕೆ ಮಾಡಲಾಗಿದೆ ಎಂದು ವರದಿ ಪ್ರಕಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದು ನಿಜವೇ;

(ಆ) ಅರ್ಜಿಗಳನ್ನು ಆಹ್ವಾನಿಸುವ ಮೊದಲೇ ಕರ್ನಾಟಕ ಗೃಹ ಮಂಡಳಿಯು ಮನೆಗಳನ್ನು ಹಂಚಬಹುದೇ; ಹಾಗಿದ್ದಲ್ಲಿ, ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಈ ರೀತಿಯಾಗಿ ಮನೆ/ನಿವೇಶನ ಹಂಚಿಕೆ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ವರದಿಯಲ್ಲಿ ತಿಳಿಸಿರುವಂತೆ ಚಿಕ್ಕಮಗಳೂರಿನಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ೫೮ ಜನರಿಗೆ ೧೩೮ ನಿವೇಶನಗಳನ್ನು ಹಂಚಿಕೆ ಮಾಡಿರುವುದು ನಿಜವೇ;

(ಈ) ನಿಯಮಾವಳಿಗಳನ್ವಯ ಅರ್ಹವಿರುವ ಒಂದು ಅರ್ಜಿಗೆ ಒಂದು ನಿವೇಶನ/ ಮನೆ ಎನ್ನುವ ನಿಯಮವಿದ್ದರೂ, ಒಂದು ಅರ್ಜಿ ೭. ೬, ೫, ೪, ೩ ನಿವೇಶನಗಳಂತೆ ಮನಸೋ ಇಚ್ಛೆ ನಿವೇಶನಗಳನ್ನು ಹಂಚಿ ೧೯೮೩ರ ಗೃಹ ಮಂಡಳಿಯ ನಿಯಮ ೮ ಮತ್ತು ೯ರ ಸ್ಪಷ್ಟ ಉಲ್ಲಂಘನೆ ಮಾಡಿರುವ ಕುರಿತು ನಿಯಂತ್ರಣ ಮಹಾಲೇಖಪಾಲರು ನೀಡಿರುವ ವರದಿಯ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಬೀದರ್ ಜಿಲ್ಲೆಗೆ ಕುಡಿಯುವ ನೀರಿಗಾಗಿ ಹಣ ಬಿಡುಗಡೆ ಮಾಡಿರುವ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೨೦೬ (೧೯೪೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಗ್ರಾಮಾಂತರ ಪ್ರದೇಶದಲ್ಲಿ ಕುಡಿಯುವ ನೀರಿಗಾಗಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಯಶಸ್ವಿಯಾದ ಕೊಳವೆ ಬಾವಿಗಳೆಷ್ಟು ಹಾಗೂ ವಿಫಲವಾಗಿರುವ ಕೊಳವೆ ಬಾವಿಗಳೆಷ್ಟು; (ವಿವರ ನೀಡುವುದು)

(ಇ) ಈ ಕೊಳವೆ ಬಾವಿಗಳಿಗೆ ಪ್ರತಿ ವರ್ಷ ಬಿಡುಗಡೆ ಮಾಡಿದ ಹಣ ಎಷ್ಟು; ಖರ್ಚು ಮಾಡಲಾದ ಹಣ ಎಷ್ಟು; (ವಿವರ ನೀಡುವುದು)

(ಈ) ಕೊಳವೆ ಬಾವಿ ಕೊರೆಯಲು ಕೆ.ಟಿ.ಪಿ.ಪಿ. ಕಾಯಿದೆ ಪ್ರಕಾರ ಟೆಂಡರ್ ಕರೆಯಲಾಗಿದೆಯೇ; ಟೆಂಡರ್ ಕರೆದಿದ್ದಲ್ಲಿ, ಯಾವ ಯಾವ ಸಂಸ್ಥೆಗೆ, ಏಜೆನ್ಸಿಗಳಿಗೆ ಎಷ್ಟು ಮೊತ್ತದ ಕಾಮಗಾರಿ ಕೊಡಲಾಗಿದೆ;

(ಉ) ಕೆ.ಟಿ.ಪಿ.ಪಿ. ಕಾಯಿದೆ ಉಲ್ಲಂಘಿಸಿದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಪದವಿಪೂರ್ವ ಉಪನ್ಯಾಸಕರಿಗೆ ಆಗುತ್ತಿರುವ ವೇತನ ತಾರತಮ್ಯದ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ(ಪದವೀಧರರ ಕ್ಷೇತ್ರ) –**

೨೦೭ (೨೦೪೮) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪದವಿಪೂರ್ವ ಉಪನ್ಯಾಸಕರಿಗೆ ವೇತನ ಶ್ರೇಣಿಯಲ್ಲಿ ತಾರತಮ್ಯ ಆಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಕುರಿತು ೧೧–೪–೨೦೧೧ರಂದು ಸರ್ಕಾರದ ಕಾರ್ಯದರ್ಶಿ, ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ರಚಿಸಲಾದ ಅಧಿಕಾರಿಗಳ ಸಮಿತಿ ಅಧ್ಯಯನ ಮಾಡಿ ವರದಿ ಸಲ್ಲಿಸಿರುವುದೇ ?

(ಇ) ವರದಿಯ ಆಧಾರದ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

**ಕೊಪ್ಪಳ ಜಿಲ್ಲೆಯಲ್ಲಿನ ಪ್ರಾಥಮಿಕ ಶಾಲಾ ಶಿಕ್ಷಕರ ವೇತನದ ಬಗ್ಗೆ**

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೮ (೨೧೯೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಪ್ಪಳ ಜಿಲ್ಲೆಯಲ್ಲಿನ ಪ್ರಾಥಮಿಕ ಶಾಲಾ ಶಿಕ್ಷಕರ ವೇತನವನ್ನು ಮೂರು ತಿಂಗಳಿಗೊಮ್ಮೆ ಪಾವತಿ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಶಾಲಾ ಶಿಕ್ಷಕರಿಗೆ ವೇತನ ಬಟವಾಡೆ ಮಾಡುವಲ್ಲಿ ಆಗುತ್ತಿರುವ ತೊಂದರೆ ಕೇವಲ ಕೊಪ್ಪಳ ಜಿಲ್ಲೆಗಷ್ಟೇ ಸೀಮಿತವೇ ಅಥವಾ ರಾಜ್ಯದ ಇತರೆ ಜಿಲ್ಲೆಗಳಲ್ಲಿಯೂ ಈ ಸಮಸ್ಯೆ ಇದೆಯೇ; ಇದ್ದಲ್ಲಿ, ಅಂತಹ ಜಿಲ್ಲೆಗಳು ಯಾವುವು; (ವಿವರ ನೀಡುವುದು)

(ಇ) ವೇತನ ಪಾವತಿಗೆ ವಿಳಂಬವಾಗುತ್ತಿರುವುದೇಕೆ;

(ಈ) ಇಲಾಖೆಯವರ ಬೇಜವಾಬ್ದಾರಿಯಿಂದ ವಿಳಂಬವಾಗುತ್ತಿದೆಯೇ; ಅಥವಾ ಸರ್ಕಾರದಲ್ಲಿ ಅಗತ್ಯ ಅನುದಾನ ಕೊರತೆಯೇನಾದರೂ ಇದೆಯೇ;

(ಉ) ಅನುದಾನ ಕೊರತೆ ಇಲ್ಲವಾದಲ್ಲಿ, ಪ್ರತಿ ತಿಂಗಳು ವೇತನ ನೀಡುವಲ್ಲಿ ಆಗುತ್ತಿರುವ ತೊಂದರೆಗಳೇನು ; ಸರ್ಕಾರ ಈ ಸಮಸ್ಯೆಯನ್ನು ಬಗೆಹರಿಸಿ, ಶಿಕ್ಷಕರಿಗೆ ಪ್ರತಿ ತಿಂಗಳು ಸರಿಯಾದ ಸಮಯಕ್ಕೆ ವೇತನ ಪಾವತಿ ಆಗುವಂತೆ ನೋಡಿಕೊಳ್ಳುವುದೇ;

(ಊ) ವಿಳಂಬಕ್ಕೆ ಕಾರಣವಾದವರ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ; ಅಥವಾ ಕ್ರಮ ಕೈಗೊಂಡಿದ್ದರೆ ಮಾಹಿತಿಯನ್ನು ನೀಡುವುದು ?

## ವಾರ್ತಾ ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಪತ್ರಕರ್ತರಿಗೆ ಮೀಸಲಿಟ್ಟ ಹಣದ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೦೯ (೨೦೫೪) ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಾರ್ತಾ ಇಲಾಖೆ ವತಿಯಿಂದ ೨೦೧೪–೨೦೧೫ನೇ ಸಾಲಿಗೆ ಎಸ್.ಸಿ. ಪಿ–ಟಿ.ಎಸ್.ಪಿ., ಅಡಿಯಲ್ಲಿ ಪರಿಶಿಷ್ಟ ಜಾತಿ ಪತ್ರಕರ್ತರಿಗೆ ಪತ್ರಿಕೆಗಾಗಿ ಎಷ್ಟು ಹಣ ಮೀಸಲಿಡಲಾಗಿದೆ;

(ಆ) ಯಾವ ಯಾವ ಉದ್ದೇಶಕ್ಕೆ ಮೀಸಲಿಡಲಾಗಿದೆ; ಎಷ್ಟು ಹಣ ಖರ್ಚಾಗಿದೆ; ಎಷ್ಟು ಹಣ ಬಾಕಿಯದೆ ?

## ಪ್ರವಾಸೋದ್ಯಮದ ಬಗ್ಗೆ

**ಡಾ: ಎಂ.ಆರ್. ಹುಲಿನಾಯ್ಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೧೦ (೨೦೪೫) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಪ್ರವಾಸೋದ್ಯಮ ಇಲಾಖೆಯು ೨೦೧೪–೧೫, ೨೦೧೫–೧೬ರಲ್ಲಿ ಹಮ್ಮಿಕೊಂಡಿರುವ ನೂತನ ಕಾರ್ಯಕ್ರಮಗಳೇನು;

(ಆ) ೨೦೧೫–೧೬ರ ಆಯವ್ಯಯದಲ್ಲಿ ಕೇಂದ್ರ ಸರ್ಕಾರ ಪ್ರವಾಸೋದ್ಯಮ ಇಲಾಖೆಯ ಕಾರ್ಯಕ್ರಮಕ್ಕೆ ಕಡಿತಗೊಳಿಸಿರುವ ಕೇಂದ್ರ ಅನುದಾನಕ್ಕೆ ಪರ್ಯಾಯವಾಗಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಪ್ರವಾಸೋದ್ಯಮ ಎಂದರೆ ಐತಿಹಾಸಿಕ ಮತ್ತು ಧಾರ್ಮಿಕ ಸ್ಥಳಗಳು ಎಂಬ ಹೊರತಾಗಿ ವೈದ್ಯಕೀಯ ಶಿಕ್ಷಣ ಮೊದಲಾದ ಪ್ರವಾಸೋದ್ಯಮಗಳಿದ್ದು, ಅವು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಅದನ್ನು ಅಳವಡಿಸಿಕೊಳ್ಳಲು ಸರ್ಕಾರದ ಕ್ರಮವೇನು ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ8, ಕಾ.ಸೂ. 1229, ಪ್ರತಿಗಳು 1500

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. 1209, ಪ್ರತಿಗಳು 1500